<u>ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ</u>

ಸಿ.ಸಿ.1354/2021

<u>ಸಾಕ್ಷಿದಾರರ ಹೇಳಿಕೆಃ</u>

| | | | | |
|---|---|---|---|---|
| ಹೆಸರು | : | ರಾಮಚಂದ್ರ | CW: 5 | PW: 5 |
| ತಂದೆಯ ಹೆಸರು | : | ಕನ್ನಪ್ಪ | | |
| ವಯಸ್ಸು | : | 53 | | |
| ವೃತ್ತಿ | : | ಗಾರೇ ಕೆಲಸ | | |
| ವಾಸಸ್ಥಳ | : | ಬೆಳಲಕಟ್ಟೆ | | |

ದಿನಾಂಕಃ 30.12.2025 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

<u>ಮುಖ್ಯವಿಚಾರಣೆಃ – ಮಾನ್ಯ ಸ.ಸ.ಅ.ರವರಿಂದಃ–</u>

ಆರೋಪಿಗಳು ಗೊತ್ತು. ಚಾಸಾ 6 ಗೊತ್ತು. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿಲ್ಲ. ನನ್ನ ಸಮಕ್ಷಮ ಪೋಲೀಸರು ಯಾವುದೇ ದಾಳಿ ಮಾಡಿಲ್ಲ. ಈ ಪ್ರಕರಣದ ಸಂಬಂಧ ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

(ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.)

<u>ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ–</u>

ದಿಃ 24.04.2021 ರಂದು ಸಂಜೆ 4.30 ರ ಸಮಯದಲ್ಲಿ ಆರೋಪಿಯು ವೆಂಕಟೇಶ ಬೋವಿರವರ ಮನೆಯ ಪಕ್ಕದಲ್ಲಿರುವ ಸಾರ್ವಜನಿಕ ರಸ್ತೆಯಲ್ಲಿ ನಿಂತುಕೊಂಡು ಮಧ್ಯದ ಪೌಚ್ ಗಳನ್ನು ಸಾರ್ವಜನಿಕರಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡುತಿದ್ದರು ಎಂದರೆ ಸರಿಯಲ್ಲ. ಅದೇ ದಿ ನ ಸಂಜೆ 7.15 ರ ಸಮಯಕ್ಕೆ ನ್ಯಾಮತಿ ಪೊಲೀಸ್ ಠಾಣೆಯ ಪಿಎಸ್ ಐ ಹಾಗೂ ಸಿಬ್ಬಂದಿಯವರು ಸಮವಸ್ತ್ರದಲ್ಲಿ ಬರುತ್ತಿದ್ದಾಗ ಅವರನ್ನು ನೋಡಿದ ಆರೋಪಿಯು ತನ್ನ ಕೈಯಲ್ಲಿದ್ದ ವಿಸ್ಕಿ ಪೌಚ್ ಗಳ ಬಾಕ್ಸ್ ಹಾಗೂ

ಕೈಯಲ್ಲಿದ್ದ ಹಣವನ್ನು ಅಲ್ಲಿಯೇ ಬಿಸಾಕಿ ಓಡಿಹೋದನು ಎಂದರೆ ಸರಿಯಲ್ಲ. ನಂತರ ಚಾಸಾ 2 ರವರು ಓಡಿಹೋದ ವ್ಯಕ್ತಿಯ ಬಗ್ಗೆ ನನ್ನನ್ನು ಹಾಗೂ ಚಾಸಾ 6 ರವರನ್ನು ವಿಚಾರಿಸಿದರು ಎಂದರೆ ಸರಿಯಲ್ಲ. ಓಡಿಹೋದ ವ್ಯಕ್ತಿಯ ಬಗ್ಗೆ ನಾನು ಹಾಗೂ ಚಾಸಾ 6 ರವರು ಚಾಸಾ 2 ರವರಿಗೆ ಆತನ ಹೆಸರು ಮತ್ತು ವಿಳಾಸವನ್ನು ತಿಳಿಸಿದೆವು ಎಂದರೆ ಸರಿಯಲ್ಲ. ಚಾಸಾ 2 ರವರು ಚಸಾ 3 ಮತ್ತು 4 ಮತ್ತು 6 ಹಾಗೂ ನಮ್ಮಗಳ ಸಮಕ್ಷಮದಲ್ಲಿ ಆರೋಪಿಯು ರಸ್ತೆಯಲ್ಲಿ ಬಿಸಾಕಿ ಹೋಗಿದ್ದ ನೆಲದ ಮೇಲೆ ಬಿದ್ದಿದ್ದ ವಿಸ್ಕಿ ಪೌಚ್ ಗಳನ್ನು ಪರಿಶೀಲಿಸಿದಾಗ ರಟ್ಟಿನ ಬಾಕ್ಸ್ ನಲ್ಲಿ ಓರಿಜಿನಲ್ ಚಾಯ್ಸ್‌ನ 90 ಎಂ ಎಲ್ ನ 88 ವಿಸ್ಕಿ ಪೌಚ್ ಗಳಿದ್ದವು ಎಂದರೆ ಸರಿಯಲ್ಲ. ಆರೋಪಿ ಯು 150 ರೂ ಹಣವನ್ನು ಅಲ್ಲಿಯೇ ಬಿಟ್ಟು ಹೋಗಿದ್ದು ಅದನ್ನು ನನ್ನ ಹಾಗೂ ಚಾಸಾ 3 ಮತ್ತು 4 ಮತ್ತು 6 ರವರ ಸಮಕ್ಷಮದಲ್ಲಿ ಅವುಗಳನ್ನು ವಶಪಡಿಸಿಕೊಂಡರು ಎಂದರೆ ಸರಿಯಲ್ಲ. ನಾನು ಈ ಸಂಬಂಧ ಪೊಲೀಸರಿಗೆ ಹೇಳಿಕೆ ನೀಡಿದೆವು ಎಂದರೆ ಸರಿಯಲ್ಲ. ಸಾಕ್ಷಿಯು ಒಪ್ಪದ ಹೇಳಿಕೆಯನ್ನು ನಿಪಿ 7 ಎಂದು ಗುರುತಿಸಲಾಯಿತು.

ಎಲ್ಲಾ ವಿಚಾರಗಳು ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

<u>ಪಾಟೀ ಸವಾಲುಃ- ಆರೋಪಿ ಪರ ವಕೀಲರಿಂದಃ-</u>

ಆರೋಪಿ ಪರ ವಕೀಲರು ಪಾಟೀ ಸವಾಲು ಏನು ಇಲ್ಲ ಎಂದು ತಿಳಿಸಿದ ಮೇರೆಗೆ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.